ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

PWD ಇಲಾಖೆಯ ಬಿಲ್ಲುಗಳ ಕುರಿತು.

ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

257 (207) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 6 ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೊಂಡ ಕಾಮಗಾರಿಗಳಾವುವು; (ಕಾಮಗಾರಿಗೆ ನಿಗದಿ ಪಡಿಸಿದ ಮೊತ್ತ, ವೆಚ್ಚವಾದ ಮೊತ್ತ, ಕಾಮಗಾರಿ ಕೊನೆಗೊಂಡ ದಿನಾಂಕ, ಕಾಮಗಾರಿ ಕುರಿತು ಗುತ್ತಿಗೆದಾರರಿಗೆ ಪಾವತಿಸಲಾದ ಮೊತ್ತ, ಸದರಿ ಕಾಮಗಾರಿ ಕುರಿತು ಅಂತಿಮ ಬಿಲ್ಲು ಪಾವತಿಸಿದ ದಿನಾಂಕದೊಂದಿಗೆ ಸಮಗ್ರ ಮಾಹಿತಿಯನ್ನು ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೊಂಡ ಕಾಮಗಾರಿಗಳನ್ನು ಯಾವ ರೀತಿಯ ಗುತ್ತಿಗೆದಾರರಿಗೆ ನೀಡಲಾಗುತ್ತಿತ್ತು; ಕ್ಲಾಸ್ 1, 2 ಮತ್ತು 3 ದರ್ಜೆಯ ಗುತ್ತಿಗೆದಾರರು ಯಾವ ಕಾಮಗಾರಿಗಳನ್ನು ಪೂರ್ಣಗೊಳಿಸಿರುತ್ತಾರೆ; ಅದರ ಮೊತ್ತವೆಷ್ಟು; (ಗುತ್ತಿಗೆದಾರರ ಹೆಸರು, ಸಂಸ್ಥೆಯ ಹೆಸರು, ವಿಳಾಸ ಮತ್ತು ಸಂಪರ್ಕ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ಜಿಲ್ಲೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಯಲ್ಲಿ ಗುತ್ತಿಗೆದಾರರಿಗೆ ಪಾವತಿಸಲು ಬಾಕಿ ಇರುವ ಬಿಲ್ಲುಗಳ ಒಟ್ಟು ಮೊತ್ತವೆಷ್ಟು? (ಬಿಲ್ಲು ಸಂಖ್ಯೆಯೊಂದಿಗೆ ವರ್ಷವಾರು ಮಾಹಿತಿ ನೀಡುವುದು)